# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 46, ಜೆ.ಸಿ ನಗರ. ಬೆಂಗಳೂರು.

ಸಂಖ್ಯೆ: ಸ.ಅ/ವಾ-46/ಪಿ.ಆರ್/03/2020-21 ದಿನಾಂಕ:09-11-2020

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 07-11-2020 ರಂದು ವಾರ್ಡ್ ನಂ:46 ಜೆ.ಸಿ.ನಗರದ ಸಿಟಿಜನ್ ಪಾರ್ಕ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

## ::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1. | ಎಸ್.ಜಿ.ರವೀಂದ್ರ. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | ಹಾಜರಿ |
| 2. | ಯುವರಾಜ್.ಬಿ | ಸದಸ್ಯ ಕಾರ್ಯದರ್ಶಿ ವಾಡ್ ನಂ: 46 | ಹಾಜರಿ |
| 3. | ಡಾ.ಎಸ್.ಶ್ರೀದೇವಿ | ಆರೋಗ್ಯ ವೈಧ್ಯಾಧಿಕಾರಿಗಳು ವಾಡ್ ನಂ: 46 | ಗೈರುಹಾಜರಿ |
| 4. | ಹೆಚ್.ಮೂರ್ತಿ | ಕಂದಾಯ ವಸೂಲಿದಾರರು ವಾರ್ಡ್ ನಂ: 46 | ಗೈರುಹಾಜರಿ |
| 5. | ಗಣೇಶ್.ಕೆ.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ:46 | ಹಾಜರಿ |
| 6. | ಸುವರ್ಣದೇವಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿ |
| 7. | ಎಂ.ಚಂದ್ರಶೇಖರ್ | ಟ್ರಾಫಿಕ್ ಪಿ.ಎಸ್.ಐ | ಗೈರುಹಾಜರಿ |
| 8. | ಶಿವಾಜಿರಾವ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಹಾಜರಿ |
| 9. | ಶ್ರೀ ಮಂಜುನಾಥ್ ಕೆ.ಎನ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) | ಹಾಜರಿ |
| 10. | ಎನ್.ಶಿವಪ್ಪ | ಘನ ತ್ಯಾಜ್ಯ ಸೂಪ್ರವೈಸರ್ | ಹಾಜರಿ |
| 11. | ರಾಜು.ಎಂ | ಘನ ತ್ಯಾಜ್ಯ ಸೂಪ್ರವೈಸರ್ | ಹಾಜರಿ |
| 12. | ಹರೀಶ್ | ಸ್ಥಳಿಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಿ |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:46 ರವರು ದಿನಾಂಕ :07-11-2020 ಈ ಹಿಂದಿನ ಸಭೆಯಲ್ಲಿ ನಡೆದಂತ ವಿಷಯಗಳು ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

- ಆರ್.ಟಿ ನಗರ 2ನೇ ಬ್ಲಾಕ್‌ನಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದರ ಬಗ್ಗೆ ಸೂಕ್ತ ಕ್ರಮ ವಹಿಸಲು ಕೋರಿರುತ್ತಾರೆ.
- ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿದರು.

- ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಯುವರಾಜ್.ಬಿ ರವರು ಈಗಾಗಲೇ ರಸ್ತೆಗುಂಡಿ ಮುಚ್ಚುವ ಕೆಲಸವು ಪ್ರಾರಂಭವಾಗಿದ್ದು, ತ್ವರಿತ ಗತಿಯಲ್ಲಿ ಪೂರ್ಣ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ತಿಳಿಸಿದರು.
- ತಿಮ್ಮಯ್ಯ ಗಾರ್ಡನ್ 17ನೇ ಅಡ್ಡ ರಸ್ತೆಯ ನಿವಾಸಿಗಳಿಗೆ ನೀರಿನ ತೊಂದರೇ ಇರುವುದರ ಬಗ್ಗೆ ಚರ್ಚಿಸಲಾಯಿತು ಹಾಗೂ ಬಿಡ್ಲ್ಯೂಎಸ್ಎಸ್‌ಬಿ ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
- ಟಿ.ವಿ ಟವರ್ ರಸ್ತೆಯ ಬದಿಯಲ್ಲಿ ಮರಗಳನ್ನು ತೆರವುಗೊಳಿಸಿರುತ್ತಾರೆ ಸದರಿ ಸ್ಥಳಗಳಲ್ಲಿ ಮರಗಳ ಸಸಿಗಳನ್ನು ನೆಡಲು ಸೂಚಿಸಲಾಯಿತು.
- ವಾರ್ಡ್ ವ್ಯಾಪತಿಯಲ್ಲಿನ ಬ್ಲಾಕ್‌ಸ್ಪಾಟ್‌ಗಳಲ್ಲಿ ಸಿ.ಸಿ ಕ್ಯಾಮೆರ ಅಳವಡಿಸಲಾಗಿದ್ದು, ಕಸ ಹಾಕುವವರ ಮೇಲೆ ಕ್ರಮ/ದಂಡ ವಿದಿಸಲು ಮಾರ್ಷಲ್ ರವರಿಗೆ ಸೂಚಿಸಲಾಯಿತು.
- ವಾರ್ಡ್ ಪ್ರದೇಶಗಳಲ್ಲಿ ವಿದ್ಯುತ್ ವೈರಗಳ ಮೇಲೆ ಚಾಚಿಕೊಂಡಿರುವ ಮರದ ರೆಂಬೆಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.
- ವಾರ್ಡ್ 46ರ ಸುತ್ತಮುತ್ತಲಿನಲ್ಲಿ ಬರುವ ಎಲ್ಲಾ ವಾರ್ಡ್ ನೋಡಲ್ ಅಧಿಕಾರಿಗಳೊಂದಿಗೆ ಸಭೆ ನಡೇಸಲು ಸೂಚಿಸಲಾಯಿತು
- ಬೀದಿ ದೀಪ ನಿರ್ವಹಣೆ ಸಮರ್ಪಕವಾಗಿ ಮಾಡಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.
- ಹಸಿ ತ್ಯಾಜ್ಯ ಮತ್ತು ಒಣತ್ಯಾಜ್ಯ ಬೇರ್ಪಡಿಸಿ ನೀಡುವಂತೆ ಮತ್ತು ಗಿಡಗಳ ನೆಡಲು ಪರಿಸರವನ್ನು ಸ್ವಚ್ಛವಾಗಿಡುವ ಬಗ್ಗೆ ಸುತ್ತ ಮುತ್ತಲಿನ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಅಮ್ಮಿಕೊಳ್ಳಲು ತಿಳಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 46, ಜೆ.ಸಿ.ನಗರ

-ಸಹಿ-
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 46, ಜೆ.ಸಿ ನಗರ

**<u>ಪ್ರತಿಯನ್ನು:-</u>**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಕಡತಕ್ಕೆ.